## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎ.ಎಂ.ಪತ್ತಾರ. ನಿವೃತ್ತ ಜಿಲ್ಲಾ ನ್ಯಾಯಾಧೀಶರು ಹಾಗೂ ಇಲಾಖಾ ವಿಚಾರಣಾಧಿಕಾರಿಗಳು ಇವರಿಗೆ ಸಂಚಿತ ಸಂಭಾವನೆ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ:- 1. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 6 ಸೇಇವಿ 2010, ದಿ:28.04.2011
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 173 ವಿಸೇಬಿ 2013, ದಿ:05.11.2014
3. ವಿಚಾರಣಾಧಿಕಾರಿಯವರ ವರದಿ ದಿನಾಂಕ: 31.07.2015

****

**ಪ್ರಸ್ತಾವನೆ:**

ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಚಿಕ್ಕಲವಾಳ ಗ್ರಾಮ ಪಂಚಾಯತಿ ವ್ಯಾಪ್ತಿಯ ಪಾಂಗೇರಿ ಗ್ರಾಮದಲ್ಲಿ 2011-12ನೇ ಸಾಲಿನಲ್ಲಿ 09 ಎಕರೆ ಗಾಯರಾಣ ಜಮೀನಿನಲ್ಲಿ ನಿವೇಶನಗಳನ್ನು ಬಡವರಿಗೆ ಹಂಚಿಕೆ ಮಾಡುವ ಮಂಜೂರು ಮಾಡಿದ್ದರೂ ಸಹ, ನಿವೇಶನಗಳನ್ನು ಫಲಾನುಭವಿಗಳಿಗೆ ಹಂಚಿಕೆ ಮಾಡಲು ಆಸಕ್ತಿ ತೋರಿಸದೆ, ಕರ್ತವ್ಯಲೋಪವೆಸಗಿದ್ದ ಕಾರಣ ಹಾಗೂ ಫಲಾನುಭವಿಗಳಿಂದ ಅಕ್ರಮವಾಗಿ ವಂತಿಕೆಯನ್ನು ಪಡೆದಿರುವ ಆರೋಪದ ಮೇರೆಗೆ ಚಿಕ್ಕೋಡಿ ತಾಲ್ಲೂಕು ಪಂಚಾಯತ್‌ನ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಯಾದ ಶ್ರೀ ಎಂ.ಎಸ್.ಬಿರಾದಾರ ಪಾಟೀಲ್ ಹಾಗೂ ಹಿಂದಿನ ಪ್ರಭಾರಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಚಿಕ್ಕಲವಾಳ ಗ್ರಾಮ ಪಂಚಾಯಿತಿ ಚಿಕ್ಕೋಡಿ ತಾಲ್ಲೂಕು, ಶ್ರೀ ಎ.ಎಸ್.ಬೋರಗಾಂವಿ ಇವರುಗಳಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11 ರ ಪ್ರಕಾರ ದಿನಾಂಕ: 11.11.2013 ರಂದು ಜಾರಿ ಮಾಡಲಾಗಿದ್ದ ಕಾರಣ ಕೇಳುವ ನೋಟೀಸಿಗೆ ಅಧಿಕಾರಿಗಳು ನೀಡಿದ್ದ ಲಿಖಿತ ರಕ್ಷಣಾ ಹೇಳಿಕೆಯು ತೃಪ್ತಿಕರವಾಗಿಲ್ಲದ ಕಾರಣ, ಪ್ರಕರಣದ ಸತ್ಯಾಸತ್ಯತೆಯನ್ನು ತಿಳಿಯಲು ಇವರ ಇಬ್ಬರ ವಿರುದ್ಧ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ), ನಿಯಮಾವಳಿಗಳು 1957ರ ನಿಯಮ 11 ಸಹವಚನ 13ರ ಪ್ರಕಾರ ವಿವರವಾದ ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು, ಮೇಲೆ (2) ರಲ್ಲಿ ಓದಲಾದ ದಿನಾಂಕ: 05.11.2014ರ ಸರ್ಕಾರಿ ಆದೇಶದಲ್ಲಿ, ಅದೇ ನಿಯಮಾವಳಿಗಳ ನಿಯಮ -11 (2)ರ ಪ್ರಕಾರ ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿದ್ದ ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ಶ್ರೀ ಎ.ಎಂ.ಪತ್ತಾರ, ಇವರು ಮೇಲೆ (3) ರಲ್ಲಿ ಓದಲಾದ ಪತ್ರ ದಿನಾಂಕ: 31.07.2015 ರೊಂದಿಗೆ ಶಿಸ್ತುಪ್ರಾಧಿಕಾರಿಯಾದ ಸರ್ಕಾರಕ್ಕೆ ವಿಚಾರಣಾ ವರದಿಯನ್ನು ಸಲ್ಲಿಸಿ, ರೂ. 15,000/-ಗಳ ಸಂಭಾವನೆಯನ್ನು ಮಂಜೂರು ಮಾಡುವಂತೆ ಕೋರಿರುತ್ತಾರೆ.

ವಿಚಾರಣಾಧಿಕಾರಿಯವರು, ಇಲಾಖಾ ವಿಚಾರಣೆಯನ್ನು ನಡೆಸಿ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುವುದರಿಂದ, ವಿಚಾರಣಾಧಿಕಾರಿಯವರಿಗೆ ಅವರ ನೇಮಕಾತಿ ಸಂಧರ್ಭದಲ್ಲಿ ಚಾಲ್ತಿಯಲ್ಲಿದ್ದಂತೆ ಸಂಚಿತ ಸಂಭಾವನೆ ಹಾಗೂ ವಾಹನ ಭತ್ಯೆಯನ್ನು ಮಂಜೂರು ಮಾಡಲು ಸರ್ಕಾರವು ತೀರ್ಮಾನಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 173 ವಿಸೇಚಿ 2013 ಬೆಂಗಳೂರು ದಿನಾಂಕ: 11-09-2015**

ಶ್ರೀ ಎ.ಎಂ.ಪತ್ತಾರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿ, ಇವರಿಗೆ ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 6 ಸೇಇವಿ 2010, ದಿನಾಂಕ:28.04.2011ರ ಪ್ರಕಾರ ವಾಹನ ಭತ್ಯೆಯೂ ಸೇರಿದಂತೆ ಒಟ್ಟು ರೂ.15,000/- (ರೂ. ಹದಿನೈದು ಸಾವಿರಗಳು ಮಾತ್ರ) ಗಳ ಸಂಭಾವನೆ ಮಂಜೂರು ಮಾಡಿದೆ.

ಶ್ರೀ ಎ.ಎಂ.ಪತ್ತಾರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಹಾಗೂ ವಿಚಾರಣಾಧಿಕಾರಿಗಳು, ಇವರಿಗೆ ಸದರಿ ಮೊತ್ತವನ್ನು ಪಾವತಿಸುವ ಕುರಿತು ಕೂಡಲೇ ಅಗತ್ಯ ಕ್ರಮ ವಹಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ಬಿ.ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ &ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ,

1) ಮಹಾಲೇಖಪಾಲರು.(ಎ & ಇ) ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ
3) ಶ್ರೀ ಎ.ಎಂ.ಪತ್ತಾರ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಇಲಾಖಾ ವಿಚಾರಣಾಧಿಕಾರಿಗಳು, ಬೆಳಗಾವಿ.
4) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಉಪ ಕಾರ್ಯದರ್ಶಿ (ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
5) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅಪಂ.ರಾಜ್ ಇಲಾಖೆ
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.